# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

************************************************************************************

ಸಂಖ್ಯೆ: w-137/Committee/Proceding -31/2021-22 dt. 10-02-2022

## ಸಭೆಯ ನಡವಳಿಗಳು

10-02-2022 ರಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಂಖ್ಯೆ: 137 ರಾಯಪುರಂ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಮಗಾರಿ) ವಸಂತನಗರ ಉಪ ವಿಭಾಗ ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 137 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು

## ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -137ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಗೈರು ಹಾಜರಾದ ವಾಹನ ಮತ್ತು ಕಾರ್ಮಿಕರ ವೇತನವನ್ನು ಕಡತಗೊಳಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

Scanned with CamScanner

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ಗಳಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ನೀಡಿದರು ಹಾಗೂ 2021-22ನೇ ಸಾಲಿನ ಕಾರ್ಯಕ್ರಮ ಪಟ್ಟಿಗಳಿಗೆ ಅಂದಾಜು ಪಟ್ಟಿ ತಯಾರಿಸಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ಕೋರಿ ಕಡತವನ್ನು ಸಲ್ಲಿಸಿರುವುದಾಗಿ ಸಭೆಯಲ್ಲಿ ವಿವರಣೆ ನೀಡಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಕಂಡುಬಂದಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು.ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯಲ್ಲಿ ಗುಂಡಿಗಳನ್ನು ಮುಚ್ಚಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು

ಬಿಡಬ್ಲೂಎಸ್‌ಎಸ್‌ಬಿ ಅಧಿಕಾರಿಗಳು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಂ ಕಛೇರಿಗೆ ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು.

ಬೆಸ್ಕಂ ಅಧಿಕಾರಿಯವರು ವಾರ್ಡ್ 137ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

----3

Scanned with CamScanner

ಮಾನ್ಯ ಅಧ್ಯಕ್ಷರು ಕಂದಾಯ ಅಧಿಕಾರಿಗಳಿಗೆ ಮತದಾನದ ಗುರ್ತಿನ ಚೀಟಿ ವಿತರಿಸುವ ಮತ್ತು ಹೊಸ ಮತದಾರರ ಗುರ್ತಿನ ಚೀಟಿ ನೋಂದಣಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಬಿ.ಬಿ.ಎಂ.ಪಿ ಚುನಾವಣೆಯು ಕೆಲವು ತಿಂಗಳುಗಳಲ್ಲಿ ನಡೆಯುವ ಸಾಧ್ಯತೆ ಇರುವುದರಿಂದ ಹೊಸದಾಗಿ ಮತದಾರರ ಗುರ್ತಿನ ಚೀಟಿ ನೊಂದಣಿ ಮತ್ತು ತಿದ್ದುಪಡಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಸಭೆಯಲ್ಲಿ ವಿವರಣೆ ಮತ್ತು ಕೈಗೊಂಡಿರುವ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಆರೋಗ್ಯ ಪರಿವೀಕ್ಷಕರು ವಾಡ್-137 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-137 ರವರುಗಳಿಗೆ ಕೋವಿಡ್-19 ಪೂರ್ಣ ಪ್ರಮಾಣದಲ್ಲಿ ತಗ್ಗಿದ್ದು ವಾರ್ಡ್ ನಲ್ಲಿ ಲಸಿಕೆ ಅಭಿಯಾನ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಸಾರ್ವಜನಕರು ಸ್ವಂಧಿಸುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು ದಿನಗಳು ನಿಲ್ಲಿಸಿರುವ ವಾಹನಗಳನ್ನು ಕಾಮಗಾರಿ ಇಲಾಖೆ ಮತ್ತು ಪೊಲೀಸ್ ಇಲಾಖೆಯವರು ಗುರ್ತಿಸಿ ಸದರಿ ವಾಹನಗಳನ್ನು ಹಾರಜು ಪ್ರಕ್ರಿಯೆಯನ್ನು ಸರ್ಕಾರ ಗುರ್ತಿಸಿದ ವ್ಯಕ್ತಿಗಳಿಂದ ಮಾಡಿಸುವ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಸದರಿ ವಿಷಯದ ಬಗ್ಗೆ ಪೊಲೀಸ್ ಇಲಾಖೆಯೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ 137ರ ವ್ಯಾಪ್ತಿಯಲ್ಲಿ ಮಾಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-137ರ ಮಾಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 9750 ಎಸ್ ಡಬ್ಲೂಎಂ. ದಂಡ ರೂ. 6500 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

--4

Scanned with CamScanner

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ವಸಂತನಗರ ಉಪ ವಿಭಾಗ) ಬಿ.ಬಿ.ಎಂ.ಪಿ, ದೂ. ಸಂಖ್ಯೆ: 9845720286 | ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ | [signature] |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 137 ಬಿ.ಬಿ.ಎಂ.ಪಿ, ದೂ. ಸಂ 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್. ದೂ. 9986537126 ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -137 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ರವರ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) ವಾರ್ಡ್-137, ದೂ. 9342582372 | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ಬಸವಲಿಂಗಯ್ಯ ದೂ. 9686418488 | ಸದಸ್ಯರು | [signature] |
| 6 | ಶ್ರೀ ಸಿ. ಆರ್ ರವಿ ಪ್ರಸಾದ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845802912 | ಸದಸ್ಯರು | [signature] |
| 7 | ಶ್ರೀ ರಿಜ್ವಾನ್, ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845262860 | ಸದಸ್ಯರು | Rizwan |
| 8 | ಶ್ರೀ ರಾಜು, ದೂ.. 7676512877 ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. | ಸದಸ್ಯರು | — |
| 9 | ಶ್ರೀಮತಿ ಆಶಾ. ದೂ. 9731317223 ಕಂದಾಯ ಪರಿವೀಕ್ಷಕರು | ಸದಸ್ಯರು | [signature] |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ | ಸದಸ್ಯರು | [signature] |
| 11 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಶ್ರೀ ಕುಮಾರ್ ಸ್ವಾಮಿ, ದೂ. 9060341644 | ಸದಸ್ಯರು | [signature] |
| 12 | ಸಹಾಯಕ ಕಾರ್ಯ ಪಾಲಕ ಅಭಿಯಂತರರು (ಬೆಸ್ಕಂ) ರವರ ಪ್ರತಿನಿಧಿ. ದೂ. 9449840364 | ಸದಸ್ಯರು | [signature] 10/2/22 |

[signature]
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 137
ವಾರ್ಡ್ ಹಂತದ ಸಮಿತಿ

[signature]
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 137

Scanned with CamScanner